**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವರ್ಷಗಳಿಂದ ಬೋಧಕ-ಬೋಧಕೇತರ ಹುದ್ದೆಗಳನ್ನು ತುಂಬದೆ ಇರುವುದರಿಂದ ಶೈಕ್ಷಣಿಕ ವ್ಯವಸ್ಥೆಯು ಅಧೋಗತಿಯತ್ತ ಸಾಗುತ್ತಿದೆ. ವಿಶ್ವವಿದ್ಯಾಲಯಗಳಲ್ಲಿ ಉತ್ತಮ ಶಿಕ್ಷಣ ನೀಡಲು ಸಾದ್ಯವಾಗದೆ ಶೈಕ್ಷಣಿಕ ವ್ಯವಸ್ಥೆ ಕುಂಟಿತವಾಗಿದೆ. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕೆಲವು ವಿಷಯಗಳಲ್ಲಿ ಒಬ್ಬರು ಕಾಯಂ ಅಧ್ಯಾಪಕರು ಇರುವುದಿಲ್ಲ. ಅತಿಥಿ ಉಪನ್ಯಾಸಕರು ವಿಭಾಗಗಳನ್ನು ನಡೆಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳು ಮುಚ್ಚುವಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಸರ್ಕಾರವು ಕೆಲವು ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಬೋಧಕೇತರ ಹುದ್ದೆಗಳನ್ನು ತುಂಬಲು ಅನುಮತಿ ನೀಡಿದ್ದರು ಭರ್ತಿ ಮಾಡಿಕೊಳ್ಳಲು ಸಾದ್ಯವಾಗುತ್ತಿಲ್ಲ. ಆದ್ದರಿಂದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡಬೇಕು ಹಾಗೂ ಕೆಲವೊಂದು ವಿಶ್ವವಿದ್ಯಾಲಯಗಳಲ್ಲಿ ಈಗಾಗಲೇ ಅನುಮತಿ ನೀಡಿರುವ ಬೋಧಕ, ಬೋಧಕೇತರರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೂಡಲೇ ಅವಕಾಶ ಮಾಡಿಕೊಡಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:-**

ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿ, ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿದ್ದು, ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳ ಬೋಧಕ / ಬೋಧಕೇತರ ಹುದ್ದೆಗಳ ವಿಲೀನಾತಿ ಹಾಗೂ ರಾಜ್ಯದಲ್ಲಿ ಹೊಸದಾಗಿ ಪರಿಶಿಷ್ಟ ಒಳಮೀಸಲಾತಿ ಬಿಂದುಗಳನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಿರುವ ಕಾರಣದಿಂದಾಗಿ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ2025, ದಿನಾಂಕ: 03.09.2025ರನ್ವಯ ಪರಿಷ್ಕೃತ ಮೀಸಲಾತಿ ಬಿಂದುಗಳನ್ನು ಅಳವಡಿಸಿಕೊಂಡು ನೇರ ನೇಮಕಾತಿ ಮಾಡಿಕೊಳ್ಳಬೇಕಾಗಿದ್ದು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಪರಿಷ್ಕೃತ ಮೀಸಲಾತಿ ಬಿಂದುಗಳನ್ನು ಗುರುತಿಸಿಕೊಳ್ಳುವಲ್ಲಿ ಕಾರ್ಯಪ್ರಗತಿಯಲ್ಲಿರುತ್ತವೆ.

ಪರಿಶಿಷ್ಟ ಜಾತಿ ಒಳಮೀಸಲಾತಿ ಆದೇಶವನ್ನು ಹೊರಡಿಸುವ ಪೂರ್ವದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ದಾವಣಗೆರೆ ವಿಶ್ವವಿದ್ಯಾಲಯ, ರಾಣಿಚನ್ನಮ್ಮ ವಿಶ್ವವಿದ್ಯಾಲಯ, ಮಂಗಳೂರು ವಿಶ್ವವಿದ್ಯಾಲಯಗಳಿಗೆ ಹಲವು ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದಿಂದ ಅನುಮತಿ ನೀಡಲಾಗಿ, ಸದರಿ ವಿಶ್ವವಿದ್ಯಾಲಯಗಳು ನೇಮಕಾತಿ ಪ್ರಕ್ರಿಯೆಯನ್ನು ನಡೆಸಿರುತ್ತವೆ.

ಪ್ರಸ್ತುತ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನೆ, ಮೂಲಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿದ್ದು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಆಡಳಿತಾತ್ಮಕ/ ಶೈಕ್ಷಣಿಕ/ ಸಂಶೋಧನಾತ್ಮಕ/ಆರ್ಥಿಕವಾಗಿ ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕಾರ್ಯಚರಣೆಯಲ್ಲಿರುತ್ತದೆ.

*******

**ಸಂಖ್ಯೆ: ಇಡಿ 17 ಯುಎನ್‌ಇ 2026**

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು